ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 26/3/2021

# ನೂತನ ಜಡ್ಜ್‌ಗಳ ಪ್ರಮಾಣವಚನ

ಬೆಂಗಳೂರು: ರಾಜ್ಯ ಹೈಕೋರ್ಟ್‌ನ ಹೆಚ್ಚುವರಿ ನ್ಯಾಯಮೂರ್ತಿಗಳಾಗಿ ನೇಮಕಗೊಂಡಿರುವ ನ್ಯಾ.ರಾಜೇಂದ್ರ ಬದಾಮಿಕರ್ ಹಾಗೂ ಖಾಜಿ ಜೈಬುನ್ನಿಸಾ ಮೊಹಿಯುದ್ದೀನ್ ಅವರು ಗುರುವಾರ ಪ್ರಮಾಣ ವಚನ ಸ್ವೀಕರಿಸಿದರು.





ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಗಳ ಕೋರ್ಟ್ ಹಾಲ್‌ನಲ್ಲಿ ನಡೆದ ಸರಳ ಕಾರ್ಯಕ್ರಮದಲ್ಲಿ ಮುಖ್ಯ ನ್ಯಾಯಮೂರ್ತಿ ಎ.ಎಸ್. ಓಕ್ ಅವರು ನೂತನ ನ್ಯಾಯಮೂರ್ತಿಗಳಿಬ್ಬರಿಗೆ ಪ್ರಮಾಣ ವಚನ ಬೋಧಿಸಿದರು. ಮುಂದಿನ ಎರಡು ವರ್ಷಗಳ ಕಾಲ ಇವರು ಹೆಚ್ಚುವರಿ ನ್ಯಾಯಮೂರ್ತಿಗಳಾಗಿ ಸೇವೆ ಸಲ್ಲಿಸಲಿದ್ದಾರೆ.

ರಾಷ್ಟ್ರಪತಿಗಳ ಆದೇಶಾನುಸಾರ ಕೇಂದ್ರ ಕಾನೂನು ಸಚಿವಾಲಯ ಇಬ್ಬರನ್ನೂ ರಾಜ್ಯ ಹೈಕೋರ್ಟ್‌ನ ಹೆಚ್ಚುವರಿ ನ್ಯಾಯಮೂರ್ತಿಗಳಾಗಿ ನೇಮಕ ಮಾಡಿ ಮಾ.22ರಂದು ಆದೇಶ ಹೊರಡಿಸಿತ್ತು. ಅದರಂತೆ ಇಬ್ಬರು ನ್ಯಾಯಮೂರ್ತಿಗಳು ಗುರುವಾರ ಪ್ರಮಾಣ ವಚನ ಸ್ವೀಕರಿಸಿದರು. ಈ ವೇಳೆ ಹೈಕೋರ್ಟ್ ನ್ಯಾಯಮೂರ್ತಿಗಳು, ನೂತನ ನ್ಯಾಯಮೂರ್ತಿಗಳು ಕುಟುಂಬದ ಸದಸ್ಯರು, ವಕೀಲರು ಉಪಸ್ಥಿತರಿದ್ದರು.

ಹೈಕೋರ್ಟ್ ರಿಜಿಸ್ಟ್ರಾರ್ ಜನರಲ್ ಆಗಿದ್ದ ರಾಜೇಂದ್ರ ಬಾದಾಮಿಕರ್ ಹಾಗೂ ವಿಚಕ್ಷಣಾ ವಿಭಾಗದ ರಿಜಿಸ್ಟ್ರಾರ್ ಆಗಿದ್ದ ಖಾಜಿ ಜೈಬುನ್ನಿಸಾ ಮೊಹಿಯುದ್ದೀನ್ ಅವರನ್ನು ರಾಜ್ಯ ಹೈಕೋರ್ಟ್ ನ್ಯಾ. ಹುದ್ದೆಗೆ ಸುಪ್ರೀಂಕೋರ್ಟ್ ಮುಖ್ಯ ನ್ಯಾ. ಎಸ್.ಎ. ಬೊಬ್ಡೆ ನೇತೃತ್ವದ ಕೊಲಿಜಿಯಂ ಕಳೆದ ಫೆ.4ರಂದು ಕೇಂದ್ರ ಸರ್ಕಾರಕ್ಕೆ ಶಿಫಾರಸು ಮಾಡಿತ್ತು. ಇಬ್ಬರು ಹೆಚ್ಚುವರಿ ನ್ಯಾಯಮೂರ್ತಿಗಳ ಸೇರ್ಪಡೆಯೊಂದಿಗೆ ರಾಜ್ಯ ಹೈಕೋರ್ಟ್ ನ್ಯಾಯಮೂರ್ತಿಗಳ ಸಂಖ್ಯೆ ಇದೀಗ 49ಕ್ಕೆ ಏರಿಕೆಯಾಗಿದೆ.